# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 783 ಗ್ರಾಪಂಕಾ 2017, ದಿನಾಂಕ: 15.11.2017.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಉಪಲೋಕ್-2/ಡಿಇ/1174/2017/ಎಆರ್ಇ-10, ದಿನಾಂಕ: 16.10.2018.
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 13.11.2018.
4) ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 26.12.2018.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ, ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರ ವಿರುದ್ಧ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

"ಆಪಾದಿತ ಸರ್ಕಾರಿ ನೌಕರರಾದ ನೀವು ಶ್ರೀ ರುದ್ರಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಆದ ನೀವು ಈ ಕೆಳಕಂಡಂತೆ ಕರ್ತವ್ಯಲೋಪವೆಸಗಿರುತ್ತೀರಿ:-

ರಸೀದಿ ಪುಸ್ತಕಗಳ ದಾಸ್ತಾನು ವಹಿಯನ್ನು ನಿರ್ವಹಿಸದೆ ಇರುವ ಬಗ್ಗೆ ಲೆಕ್ಕ ಪರಿಶೋಧನಾ ವರದಿಯಲ್ಲಿ ಆಕ್ಷೇಪಣೆಗಳು ಇರುವ ವಿಚಾರವನ್ನು ಹಾಗೂ ಕ್ರಮ ಸಂಖ್ಯೆ ಕ್ರಮಬದ್ಧವಾಗಿರದೆ ಇರುವ ರಸೀದಿ ಪುಸ್ತಕಗಳನ್ನು ಇಟ್ಟಿರುತ್ತೀರಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳಿಂದ ದೃಢೀಕರಿಸಿರುವುದಿಲ್ಲ. ಅಲ್ಲದೆ ಮನಬಂದಂತೆ ತೆರಿಗೆ ಹಣವನ್ನು ಬ್ಯಾಂಕಿಗೆ ಜಮಾ ಮಾಡಿರುತ್ತೀರಿ ಹಾಗೂ ರೆಮಿಟೆನ್ಸ್ ಪುಸ್ತಕದಲ್ಲಿ ರಸೀದಿವಾರು ವಿವರಗಳನ್ನು ನಮೂದಿಸಿರುವುದಿಲ್ಲ. ತೆರಿಗೆ ಹಣದ ರಸೀದಿಯ ಮತ್ತು ಸಂಗ್ರಹವಾದ ತೆರಿಗೆ ಹಣದ ಜಮಾವಣೆಗೆ ಸಂಬಂಧಿಸಿದಂತೆ ನ್ಯೂನತೆಗಳು ಕಂಡು ಬರುತ್ತವೆ. ಈ ಬಗ್ಗೆ ಲೆಕ್ಕ ಪರಿಶೋಧನಾ ವರದಿಯಲ್ಲಿ ಆಕ್ಷೇಪಣೆಯನ್ನು ಮಾಡಲಾಗಿದೆ.

ಆದ ಕಾರಣ ಆಪಾದಿತ ಸರ್ಕಾರಿ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಆಪಾದಿತ ಸರ್ಕಾರಿ ನೌಕರರಾದ ನೀವು ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ."

ಮೇಲೆ ಓದಲಾದ (2) ರಲ್ಲಿ, ತನಿಖಾಧಿಕಾರಿಗಳಾದ ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಪ್ರಕರಣದ ಬಗ್ಗೆ ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಉಪಲೋಕಾಯುಕ್ತರು ದಿನಾಂಕ: 16.10.2018 ರ ವರದಿಯಲ್ಲಿ ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ಸದರಿಯವರು ಬಡ್ತಿಗೆ ಅರ್ಹರಾಗುವ ಸಮಯದಿಂದ ನಾಲ್ಕು ವರ್ಷಗಳ ಅವಧಿಗೆ ಅವರ ಬಡ್ತಿಯನ್ನು ಮುಂದೂಡುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಪ್ರಕರಣದ ಸಂಬಂಧ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಸದರಿ ನೌಕರರಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಮೇಲೆ ಓದಲಾದ (4) ರಲ್ಲಿ ಆರೋಪಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸಿಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

- ಶ್ರೀ ಅಮೀನ್ ಸಾಹೇಬ್ ಬಿನ್ ಇಮಾಮ್ ಸಾಬ್, ಹಂಪಸಾಗರ-2 ಗ್ರಾಮ ಪಂಚಾಯಿತಿ, ಬಳ್ಳಾರಿ ಜಿಲ್ಲೆ ರವರು ಸಲ್ಲಿಸಿರುವ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ತನಿಖಾಧಿಕಾರಿಗಳು ನಿಯಮಾನುಸಾರ ಪರಿಶೀಲಿಸದೆ ತನಿಖಾ ವರದಿಯನ್ನು ಇಲಾಖಾ ವಿಚಾರಣೆಗೆ ಅನುಮತಿ ನೀಡಲು ತಮ್ಮ ಕಛೇರಿಗೆ

ಸಲ್ಲಿಸಿದ್ದು, ತಮ್ಮ ಅಧೀನ ಅಧಿಕಾರಿಗಳು ನಿಯಮಾನುಸಾರ ಪರಿಶೀಲಿಸದೆ ಹಾಗೂ ಯಾವುದೇ ನೋಟೀಸ್ ನೀಡದೆ ನಿಯಮ 14(ಎ) ರಂತೆ ಇಲಾಖಾ ವಿಚಾರಣೆಗೆ ಅನುಮತಿ ನೀಡಿರುವುದು ನ್ಯಾಯ ಸಮ್ಮತವಾಗಿರುವುದಿಲ್ಲ. ದೂರುದಾರರು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 234 ಮತ್ತು 269 ರಂತೆ ಮೇಲ್ಮನವಿ ಸಲ್ಲಿಸದೆ ಹಾಗೂ ತಮ್ಮಿಂದ ದೂರು ಸಲ್ಲಿಸಲು ಅನುಮತಿ ಪಡೆಯದೆ ದೂರು ಅರ್ಜಿಯನ್ನು ನನ್ನ ವಿರುದ್ಧ ದಾಖಲಿಸಿರುತ್ತಾರೆ. ಮೇಲ್ಮನವಿಯನ್ನು ಸಲ್ಲಿಸದೆ ಇದ್ದರೂ ನಿಯಮ 9 ರಂತೆ ವರದಿಯನ್ನು ಪಡೆದು ಇಲಾಖಾ ವಿಚಾರಣೆಗೆ ಆದೇಶಿಸಿರುವುದು ನ್ಯಾಯಸಮ್ಮತವಾಗಿರುವುದಿಲ್ಲ. ಮಾನ್ಯ ಉಚ್ಚ ನ್ಯಾಯಾಲಯ ದಿನಾಂಕ: 15.07.2016 ಸುಚಿಂದರ ಎ ಗುಮಾಸ್ತೆ ಮತ್ತು ಇತರರು ವಿರುದ್ಧ ಕರ್ನಾಟಕ ರಾಜ್ಯ ಪ್ರಕರಣದಲ್ಲಿ WP No 25078-80/2016(GM KLA) reported 2016(6) Kar LJ DB Nov 2016 ರಲ್ಲಿ ಆದೇಶ ಹೊರಡಿಸಿದೆ.

- ನಾನು ಸಲ್ಲಿಸಿರುವ ಆಕ್ಷೇಪಣೆಗಳನ್ನು ಮತ್ತು ಪ್ರಕರಣದಲ್ಲಿ ದೂರುದಾರರ ಸಾಕ್ಷಿ ಹೇಳಿಕೆಯಲ್ಲಿ ಮತ್ತು 2ನೇ ಸಾಕ್ಷಿದಾರರಾದ ಮುಖ್ಯ ಲೆಕ್ಕಾಧಿಕಾರಿಗಳು ಆರೋಪಗಳ ಬಗ್ಗೆ ಸಾಕ್ಷೀಕರಿಸಿರುವ ಸಾಕ್ಷಿ ಹೇಳಿಕೆಯಲ್ಲಿ ನನ್ನ ಪರವಾಗಿ ವಕೀಲರು ಪಾಟಿ ಸವಾಲಿನಲ್ಲಿ ಆರೋಪಗಳನ್ನು ಸಾಬೀತುಪಡಿಸುವುದರಲ್ಲಿ ದೂರುದಾರರು ಮತ್ತು ಮಂಡನಾಧಿಕಾರಿಗಳು ವಿಫಲರಾಗಿರುತ್ತಾರೆ. 3ನೇ ಸಾಕ್ಷಿದಾರರಾದ ಲೆಕ್ಕಾಧಿಕಾರಿಗಳು ಸಲ್ಲಿಸಿರುವ ವರದಿಯಂತೆ ಮುಖ್ಯ ಸಾಕ್ಷಿಯನ್ನು ಇಲಾಖಾ ವಿಚಾರಣೆಯಲ್ಲಿ ನನ್ನ ಗೈರು ಹಾಜರಿಯಲ್ಲಿ ನುಡಿದಿರುತ್ತಾರೆ. ನನ್ನ ಗೈರು ಹಾಜರಿಗೆ ಸಂಬಂಧಿಸಿದಂತೆ ಮನವಿಯನ್ನು ವಿಚಾರಣಾಧಿಕಾರಿಗೆ ಸಲ್ಲಿಸಿರುತ್ತೇನೆ.
- ವಿಚಾರಣಾಧಿಕಾರಿಗಳು ಮುಂದಿನ ವಿಚಾರಣೆಯನ್ನು ದಿನಾಂಕ: 15.10.2018 ಕ್ಕೆ ನಿಗದಿಪಡಿಸಿ 3ನೇ ಸಾಕ್ಷಿದಾರರನ್ನು ಪಾಟಿಸವಾಲಿಗೆ ಕಾಲಾವಕಾಶ ಕಲ್ಪಿಸಿದ್ದರು. ನಾನು ಮತ್ತು ನನ್ನ ವಕೀಲರು ವಿಚಾರಣಾಧಿಕಾರಿಗಳ ನ್ಯಾಯಾಲಯಕ್ಕೆ ಹಾಜರಾಗಿದ್ದು, ವಿಚಾರಣಾಧಿಕಾರಿಗಳು ವಿಚಾರಣೆ ಮುಕ್ತಾಯಗೊಂಡು ಏಕ ಪಕ್ಷವಾಗಿ ವಿಚಾರಣಾ ವರದಿಯನ್ನು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ದಾಖಲೆಗಳ ಪ್ರತಿಗಳನ್ನು ಪಡೆದುಕೊಳ್ಳಲು ಮನವಿಯನ್ನು ಸಲ್ಲಿಸಿದ್ದು, ಈ ತಹಲ್‌ವರೆಗೂ ದಾಖಲೆಗಳನ್ನು ನೀಡಿರುವುದಿಲ್ಲ.
- ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ: 15.10.2018 ರಂದು ಮಾನ್ಯ ಉಪಲೋಕಾಯುಕ್ತರಿಗೆ ಮತ್ತು ಗೌರವಾನ್ವಿತ ಲೋಕಾಯುಕ್ತರಿಗೆ ಪ್ರಕರಣವನ್ನು ಮುಂದುವರೆಸಬೇಕಾಗಿ ಮನವಿಯನ್ನು ಸಲ್ಲಿಸಿರುತ್ತೇನೆ. ಆದರೆ ಈ ತಹಲ್‌ವರೆಗೂ ಯಾವುದೇ ಹಿಂಬರಹ ನೀಡಿರುವುದಿಲ್ಲ. ಆದ್ದರಿಂದ ನಾನು ಸಲ್ಲಿಸಿರುವ ಆಕ್ಷೇಪಣೆ ಮತ್ತು ದಾಖಲೆಗಳನ್ನು ನಿಯಮಾನುಸಾರ ಪರಿಶೀಲಿಸಿ ಮರುವಿಚಾರಣೆಗೆ ಆದೇಶಿಸಬೇಕಾಗಿ ಮನವಿ ಮಾಡಿರುತ್ತೇನೆ.
- ನನ್ನ ವಿರುದ್ಧ ಆರೋಪ ಸಾಬೀತಾಗಿರುತ್ತದೆಂಬ ವರದಿಯಂತೆ ನನ್ನ ವಿರುದ್ಧ ದಂಡ ವಿಧಿಸಲು ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುವುದು ಕಾನೂನುಬದ್ಧವಾಗಿರುವುದಿಲ್ಲ. ಶಿಸ್ತು ಪ್ರಾಧಿಕಾರವು ದಂಡ ವಿಧಿಸುವ ಶಿಫಾರಸ್ಸನ್ನು ಒಪ್ಪುವ ಅಥವಾ ತಿರಸ್ಕರಿಸುವ ಹಾಗೂ ಮಾರ್ಪಾಡು ಮಾಡುವ ಅಧಿಕಾರವಿರುತ್ತದೆಂದು ಕೃಷ್ಣಮೂರ್ತಿ ವಿರುದ್ಧ ಕರ್ನಾಟಕ ಸರ್ಕಾರ 2017 ರ ಉಚ್ಚ ನ್ಯಾಯಾಲಯದ ಆದೇಶದಲ್ಲಿ ನಮೂದಿಸಿರುತ್ತಾರೆ. ಆದ್ದರಿಂದ ನನ್ನನ್ನು ಆರೋಪ ಮುಕ್ತಗೊಳಿಸಲು ಮತ್ತು ಉಳಿಕೆ ಇರುವ ಇಲಾಖಾ ವಿಚಾರಣೆಯನ್ನು ಮುಂದುವರೆಸಲು ಸೂಕ್ತ ನಿರ್ದೇಶನ ನೀಡಲು ಮನವಿ ಮಾಡಿರುತ್ತೇನೆ.
- ವಿಚಾರಣಾಧಿಕಾರಿಗಳು ಯಾವುದೇ ಪರಿಶೀಲನೆ ನಡೆಸದೆ ಆರೋಪ ಸಾಬೀತಾಗಿರುತ್ತದೆಯೆಂದು ಸಲ್ಲಿಸಿರುವ ವರದಿ ಸೂಕ್ತವಾಗಿರುವುದಿಲ್ಲ ಹಾಗೂ ನ್ಯಾಯ ಸಮ್ಮತವಾಗಿರುವುದಿಲ್ಲವೆಂದು ಈ ಕೆಳಕಂಡ ನ್ಯಾಯಾಲಯಗಳ ಆದೇಶಗಳಿಂದ ದೃಢಪಟ್ಟಿರುತ್ತದೆ.
    1. J.D Jain V/s The Management of S.B.I and Anr.(AIR 1982 SC 673 Para 9 Bench of 3 judges.)
    2. C.P Govil V/s Union of India 1965 D.L.T Vol(1) 16 Para 8 Pun D.B of 3 judges.)
    3. Anil Kumar V/s Presiding Officer & Ors 1986 (1) LLJ 101(Para 5&6 S.C Bench of 3 judges.)
    4. Powari T Estate V/s Barkataki(M.K) and 1965 (11) LLJ 102 (Pages 104-105) SC Bench of 3 judges.)
- ಮೇಲ್ಕಂಡ ಸಮಜಾಯಿಷಿ/ವಿವರಣೆಯನ್ನು ಪರಿಶೀಲಿಸಿ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವ 4 ವಾರ್ಷಿಕ ಬಡ್ತಿಯನ್ನು ಕಡಿತಗೊಳಿಸುವ ಶಿಕ್ಷೆಯನ್ನು ಮಾರ್ಪಾಟುಗೊಳಿಸಬೇಕಾಗಿ ಮತ್ತು ದಂಡ ವಿಧಿಸಿರುವ ಆದೇಶವನ್ನು ರದ್ದುಪಡಿಸಿ ವಿಚಾರಣೆಯನ್ನು ಮುಂದುವರೆಸಲು ಹಾಗೂ ಆರೋಪ ಮುಕ್ತಗೊಳಿಸಲು ಮನವಿ ಮಾಡಿರುತ್ತಾರೆ.

ಸದರಿ ಪ್ರಕರಣದ ಕುರಿತು ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ರವರು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಕ್ಕೆ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ವಿಚಾರಣಾ ವರದಿಯ ಪ್ರಮುಖ ಅಂಶಗಳನ್ನು ಈ ಕೆಳಕಂಡಂತೆ ಪುನರುಚ್ಚರಿಸಿದೆ:-

"41(i) From the oral and documentary evidence and materials placed on record, I hold and record my finding that the Delinquent Government Official Sri. Rudrappa, Panchayath Development Officer, Hampasagara-2, Grama panchayath, Hagaribommanahalli Taluk, Bellary District has failed to maintain absolute integrity and devotion to duty and committed an act which is unbecoming of a Government servant and found guilty of misconduct/charge under Rule 3(1)(ii) & (iii) of Karnataka Civil Services (Conduct) Rues, 1966.

(ii) Accordingly, I hold and record/assign my finding on the charge leveled by the disciplinary authority against Delinquent Government official as PROVED."

ಸರ್ಕಾರವು ಪರಿಶೀಲಿಸಿ, ಈ ಹಿನ್ನೆಲೆಯಲ್ಲಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಉತ್ತರವನ್ನು ಅಂಗೀಕರಿಸಲು ಬರುವುದಿಲ್ಲ ಮತ್ತು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಒಪ್ಪುವುದು ಸಮಂಜಸವೆಂದು ಕಂಡು ಬರುತ್ತದೆ. ಆದುದರಿಂದ ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಅಂಗೀಕರಿಸಿ, ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ರಿಂದ (iii-A) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ಸದರಿಯವರು ಬಡ್ತಿಗೆ ಅರ್ಹರಾಗುವ ಸಮಯದಿಂದ ನಾಲ್ಕು ವರ್ಷಗಳ ಅವಧಿಗೆ ಅವರ ಬಡ್ತಿಯನ್ನು ಮುಂದೂಡುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 783 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 11.03.2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವ ಹಿನ್ನೆಲೆಯಲ್ಲಿ, ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿನ ಶಿಫಾರಸ್ಸಿನನ್ವಯ, ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ರಿಂದ (iii-A) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ಮತ್ತು ಸದರಿಯವರು ಬಡ್ತಿಗೆ ಅರ್ಹರಾಗುವ ಸಮಯದಿಂದ ನಾಲ್ಕು ವರ್ಷಗಳ ಅವಧಿಗೆ ಅವರ ಬಡ್ತಿಯನ್ನು ಮುಂದೂಡುವ (Withholding four annual increments with cumulative effect and Deferring the promotion by four years, whenever he becomes due for promotion) ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬಳ್ಳಾರಿ ಜಿಲ್ಲಾ ಪಂಚಾಯತಿ, ಬಳ್ಳಾರಿ.
6) ಕಾರ್ಯನಿರ್ವಾಹಕ ಅಧಿಕಾರಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು ಪಂಚಾಯತಿ, ಹಗರಿಬೊಮ್ಮನಹಳ್ಳಿ, ಬಳ್ಳಾರಿ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಶ್ರೀ ರುದ್ರಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಂಪಸಾಗರ-2 ಗ್ರಾಮ ಪಂಚಾಯಿತಿ, ಹಗರಿಬೊಮ್ಮನಹಳ್ಳಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.